# ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ.

## ಡಾ. ಬಾಬು ಜಗಜೀವನ್ ರಾಂ ಜಯಂತಿ

ದಿನಾಂಕ. ೦೫/೦೪/೨೦೨೧

**ಆಹಾರ ಸಮಸ್ಯೆಗೆ ಪರಿಹಾರ ಕಂಡಕೊಳ್ಳಲು ಶ್ರಮಿಸಿದ ಮಹಾನಾಯಕ *: ಪ್ರೊ.ಡಿ.ಬಿ.ನಾಯಕ**

ನಮ್ಮ ದೇಶದಲ್ಲಿ ಸ್ವಾತಂತ್ರದ ನಂತರದಲ್ಲಿ  ಆಹಾರದ ಸಮಸ್ಯೆ ವಿಪರೀತವಾಗಿತ್ತು ಅದನ್ನು ಹೊಗಲಾಡಿಸಲು ನಮ್ಮ ಕೃಷಿಯಲ್ಲಿ ಬದಲಾವಣೆ ತರುವುದು ಮುಖ್ಯ ಎಂಬುದನ್ನು ಮನಗಂಡು ಆ ಸಮಯದಲ್ಲಿ ಕೃಷಿ ಸಚಿವರಾಗಿದ್ದ ಡಾ.ಬಾಬು ಜಗಜೀವನರಾಮ ಅವರು ಮಾಡಿದ್ದ ಕಾರ್ಯಗಳು ಪ್ರಶಂಸನೀಯ ಹಾಗಾಗಿ ಅವರನ್ನು ನಾವು ಹಸಿರು ಕ್ರಾಂತಿಯ ಹರಿಕಾರ ಎಂದು ಕರೆಯುತ್ತೇವೆ. ಹೀಗೆ ಕೊಟ್ಟಂತಹ ಜವಾಬ್ದಾರಿಯನ್ನು ತುಂಬಾ ಪ್ರಾಮಾಣಿಕವಾಗಿ ನಿರ್ವಹಿಸಿ ಅಲ್ಲಿಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಚಾಣಾಕ್ಷತನವನ್ನು ಜಗಜೀವನರಾಮ ಅವರು ಹೊಂದಿದ್ದರು. ಇದಕ್ಕೆ ಅವರು ರಕ್ಷಣಾ ಸಚಿವರಾಗಿ ಕಾರ್ಯ ನಿರ್ವಹಿಸಿದ ಬಗೆ ಮಾದರಿಯಾಗಿದೆ ಎಂದರು.

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಮಲ್ಲಿಗೆದಂಡೆ ಸಭಾಂಗಣದಲ್ಲಿ ಹಮ್ಮಿಕೊಂಡ ಬಾಬು ಜಗಜೀವನರಾಮ ಅವರ ಜಯಂತಿ ಕಾರ್ಯಕ್ರಮದಲ್ಲಿ ಅಧ್ಯಕ್ಷೀಯ ಮಾತುಗಳನ್ನಾಡುತ್ತಾ ಅವರು ಮಾಡಿದ ಸಾಧನೆಗಳನ್ನು ವಿವರಿಸಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಗಂಗಾನಾಯಕ ಅವರು ಮಾತನಾಡುತ್ತಾ ದಲಿತಪರವಾಗಿ ಹೊರಾಟ ಮಾಡಿದವರಲ್ಲಿ ಪ್ರಮುಖವಾಗಿ ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಮ ಅವರ ಹೆಸರುಗಳು ಮುಂಚೂಣಿಗೆ ಬರುತ್ತವೆ. ಅಂದರೆ ಧ್ವನಿ ಇಲ್ಲದವರಿಗೆ ಧ್ವನಿಯಾಗಿ ಹೊರಾಡಿದ ಇಂತಹ ಮಹಾನಾಯಕರನ್ನು ಸ್ಮರಿಸುವುದು ನಮ್ಮ ಕರ್ತವ್ಯ. ಆ ಮೂಲಕ ಅವರ ಕಾರ್ಯಗಳನ್ನು ಮೆಲಕು ಹಾಕಿ ಅಂತಹ ಕಾರ್ಯಗಳನ್ನು ನಮ್ಮ ಜೀವನದಲ್ಲೂ ಅಳವಡಿಸಿಕೊಳ್ಳಬೇಕೆಂದರು.

ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಮಲ್ಲಿಕಾರ್ಜುನ ಮಾನ್ಪಡೆ ಅವರು ನಿರೂಪಣೆ ಗೈದು ಎಲ್ಲರನ್ನು ಸ್ವಾಗತಿಸಿ ವಂದಿಸಿದರು. ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದು ಜಯಂತಿಯನ್ನು ಯಶಸ್ವಿಗೊಳಿಸಿದರು.

## ಸಮಾಚಾರ ಪತ್ರಿಕೆಗಳಲ್ಲಿ

# ಸಮಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಅಂಬೇಡ್ಕರ್, ಬಾಬೂಜಿ

ಶಿಗ್ಗಾವಿ(ಗ್ರಾಮೀಣ): ಹಸಿರು ಕ್ರಾಂತಿಯ ಹರಿಕಾರರು ಎಂದು ಕರೆಸಿಕೊಳ್ಳುವ ಬಾಬು ಜಗಜೀವನರಾಮ್ ಅವರು ಆಹಾರದ ಅಭದ್ರತೆ ಹೋಗಲಾಡಿಸುವಲ್ಲಿ ಮಹತ್ವದ ಪಾತ್ರ ನಿರ್ವಹಿಸಿದ್ದಾರೆ ಎಂದು ತಾಲೂಕಿನ ಗೊಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ.ಬಿ. ನಾಯಕ ಅವರು ಅಭಿಪ್ರಾಯಪಟ್ಟರು.

ತಾಲೂಕಿನ ಗೋಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಆಡಳಿತ ಭವನದ ಮಲ್ಲಿಗೆ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ. ಬಾಬು ಜಗಜೀವನರಾಮ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಜಾವಿವಿಯ ಕುಲಸಚಿವ ಪ್ರೊ. ಕೆ.ಎನ್. ಗಂಗಾನಾಯಕ ಮಾತನಾಡಿ, ಶೋಷಿತರ ಹಾಗೂ ದಲಿತರ ಧ್ವನಿಯಾಗಿ ಸಾಮಾಜಿಕ ನ್ಯಾಯದ ಹಿನ್ನಲೆಯಲ್ಲಿ ಹೋರಾಟ ಮಾಡಿದವರಲ್ಲಿ ಪ್ರಮುಖವಾಗಿ ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಮ್ ಅವರು ಅಗ್ರಗಣ್ಯರು. ಸಮಸಮಾಜ ನಿರ್ಮಾಣದಲ್ಲಿ ಶ್ರಮಿಸಿದ ಇಂತಹ ಮಹಾನಾಯಕರ ಜಯಂತಿ ಆಚರಿಸುವ ಮೂಲಕ ಅವರ ಚಿಂತನೆಗಳನ್ನು ಮುಂದಿನ ಪೀಳಿಗೆಯವರಿಗೆ ತಿಳಿಸುವ ಕಾರ್ಯ ಅಗತ್ಯವಾಗಿ ಎಂದರು.

ಜನಪದಕಲಾ ಅಧ್ಯಾಪಕ ಶರೀಫ್ ಮಾಕಪ್ಪನವರ ಸಹಾಯಕ ಪ್ರಾಧ್ಯಾಪಕ ಡಾ. ಮಲ್ಲಿಕಾರ್ಜುನ ಮಾನ್ಪಡೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಗೊಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಆಡಳಿತಭವನದ ಮಲ್ಲಿಗೆ ಸಭಾಂಗಣದಲ್ಲಿ ಡಾ. ಬಾಬು ಜಗಜೀವನರಾಮ್ ಜಯಂತಿ ಕಾರ್ಯಕ್ರಮವನ್ನು ಗೊಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ.ಬಿ. ನಾಯಕ ಉದ್ಘಾಟಿಸಿದರು.

**ಸಂಯುಕ್ತ ಕರ್ನಾಟಕ, ದಿನಾಂಕ ೦೬/೦೪/೨೦೨೧**



ಶಿಗ್ಗಾವಿ ತಾಲ್ಲೂಕಿನ ಗೊಟಗೋಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಸೋಮವಾರ ಡಾ.ಬಾಬು ಜಗಜೀವನರಾಮ್ ಜಯಂತಿ ಕಾರ್ಯಕ್ರಮವನ್ನು ಕುಲಪತಿ ಪ್ರೊ.ಡಿ.ಬಿ.ನಾಯಕ ಉದ್ಘಾಟಿಸಿದರು.

**ಪ್ರಜಾವಾಣಿ, ದಿನಾಂಕ ೦೬/೦೪/೨೦೨೧**

ಡಾ. ಬಾಬು ಜಗಜೀವನರಾಂ ಜಯಂತಿಯಲ್ಲಿ ಜಾವಿವಿ ಕುಲಪತಿ ಡಿ.ಬಿ. ನಾಯಕ ಅಭಿಪ್ರಾಯ

# ಆಹಾರ ಅಭದ್ರತೆ ಹೋಗಲಾಡಿಸಿದ ಜಗಜೀವನರಾಮ್



ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಸೋಮವಾರ ನಡೆದ ಡಾ. ಬಾಬು ಜಗಜೀವನರಾಂ ಜಯಂತಿ ಕಾರ್ಯಕ್ರಮವನ್ನು ಕುಲಪತಿ ಡಿ.ಬಿ. ನಾಯಕ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಶಿಗ್ಗಾಂವಿ

ಹಸಿರು ಕ್ರಾಂತಿಯ ಹರಿಕಾರರಾದ ಬಾಬು ಜಗಜೀವನರಾಮ ಅವರು ಆಹಾರದ ಅಭದ್ರತೆ ಹೋಗಲಾಡಿಸುವಲ್ಲಿ ಮಹತ್ವದ ಪಾತ್ರ ನಿರ್ವಹಿಸಿದ್ದಾರೆ ಎಂದು ಜಾವಿವಿ ಕುಲಪತಿ ಡಿ.ಬಿ. ನಾಯಕ ಅಭಿಪ್ರಾಯಪಟ್ಟರು.

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಸೋಮವಾರ ನಡೆದ ಡಾ. ಬಾಬು ಜಗಜೀವನರಾಂ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೇಶದ ಅಭಿವೃದ್ಧಿಯಲ್ಲಿ ಅವರು ಕೈಗೊಂಡ ಆಡಳಿತಾತ್ಮಕ ನಿರ್ಧಾರಗಳು ಇಂದಿಗೂ ಪ್ರಸ್ತುತ. ಕೇಂದ್ರ ಕೃಷಿ ಹಾಗೂ ರಕ್ಷಣಾ ಸಚಿವರಾಗಿ ಸಮರ್ಥವಾಗಿ ಕಾರ್ಯ ನಿರ್ವಹಿಸಿದ ಅವರು ಪ್ರಧಾನಿಯಾಗುವ ಸಾಮರ್ಥ್ಯವನ್ನು ಹೊಂದಿದ್ದರು ಎಂದು ತಿಳಿಸಿದರು.

ಕುಲಸಚಿವ ಪ್ರೊ. ಕೆ.ಎನ್. ಗಂಗಾನಾಯಕ ಮಾತನಾಡಿ, ಶೋಷಿತರ ಹಾಗೂ ದಲಿತರ ಧ್ವನಿಯಾಗಿ ಸಾಮಾಜಿಕ ನ್ಯಾಯದ ಹಿನ್ನೆಲೆಯಲ್ಲಿ ಹೋರಾಟ ಮಾಡಿದವರಲ್ಲಿ ಪ್ರಮುಖವಾಗಿ ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಂ ಅವರ ಅಗ್ರಗಣ್ಯರು. ಸಮ ಸಮಾಜ ನಿರ್ಮಾಣದಲ್ಲಿ ಶ್ರಮಿಸಿದ ಇಂತಹ ಮಹಾನಾಯಕರ ಜಯಂತಿ ಆಚರಿಸುವ ಮೂಲಕ ಅವರ ಚಿಂತನೆಗಳನ್ನು ಮುಂದಿನ ಪೀಳಿಗೆಗೆ ತಿಳಿಸುವ ಕಾರ್ಯ ಅಗತ್ಯವಾಗಿ ಆಗಬೇಕಾಗಿದೆ ಎಂದು ಹೇಳಿದರು.

ಅಧ್ಯಾಪಕರಾದ ಶರೀಫ್ ಮಾಕಪ್ಪನವರ, ಡಾ. ಮಲ್ಲಿಕಾರ್ಜುನ ಮಾನ್ಪಡೆ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

## ಹಸಿರು ಕ್ರಾಂತಿ ಮೊಳಗಿಸಿದ ಧೀಮಂತ

• **ಕನ್ನಡಪ್ರಭ ವಾರ್ತೆ** ರಟ್ಟೀಹಳ್ಳಿ

ಒಬ್ಬ ವ್ಯಕ್ತಿ ಛಲ, ನಿರಂತರ ಶ್ರಮ ಸಾಧನೆಯ ಪಥದಲ್ಲಿ ಸಾಗಬೇಕಾದರೆ ಡಾ. ಬಾಬು ಜಗಜೀವನರಾಂ ಮಾದರಿಯಾಗಿದ್ದಾರೆ ಎಂದು ಕೃಷಿ ಸಚಿವ ಬಿ.ಸಿ. ಪಾಟೀಲ ಹೇಳಿದರು.

ಇಲ್ಲಿನ ತಹಸೀಲ್ದಾರ್ ಕಚೇರಿಯಲ್ಲಿ ಸೋಮವಾರ ನಡೆದ ಡಾ. ಬಾಬು ಜಗಜೀವನರಾಂ ಅವರ ಜನ್ಮದಿನಾಚರಣೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೃಷಿಕ್ಷೇತ್ರದಲ್ಲಿ ಹಸಿರು ಕ್ರಾಂತಿ ಮೊಳಗಿಸಿ, ರಾಷ್ಟ್ರದ ಉಪ ಪ್ರಧಾನಿಯಾಗಿ ಶ್ರೇಷ್ಠ ವ್ಯಕ್ತಿತ್ವ ಹೊಂದಿದ ಅವರ ಜೀವನದ ಆದರ್ಶಗಳನ್ನು ಪಾಲಿಸಬೇಕು ಎಂದರು.

ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ಯು.ಬಿ. ಬಣಕಾರ ಮಾತನಾಡಿ, ಜಗಜೀವನರಾಂ ಅವರು ಸಮಾನತೆ, ಸಾಮಾಜಿಕ ಚಿಂತನೆಗಳ ಮೂಲಕ ಮಾದರಿಯಾಗಿದ್ದರು. ಇಂತಹ ವ್ಯಕ್ತಿಗಳ ಜಯಂತಿ ಆಚರಣೆಗೆ ಸೀಮಿತವಾಗಬಾರದು ಎಂದರು.

ತಾಪಂ ಇಒ ಎಸ್. ಉಮೇಶ, ತಾಪಂ ಅಧ್ಯಕ್ಷ ಬಂಗಾರೆಪ್ಪ ಇಕ್ಕೇರಿ, ಸುಮಿತ್ರಾ ಪಾಟೀಲ, ತಹಸೀಲ್ದಾರ್ ಕೆ. ಗುರುಬಸವರಾಜ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ವಿ.ಎಸ್. ಹಿರೇಮಠ, ಡಿಎಸ್‌ಎಸ್ ಮುಖಂಡ ಹನುಮಂತಪ್ಪ ಗಾಜೇರ, ಬಸವರಾಜ ಚಲವಾದಿ, ನಾಗರಾಜ ಬತ್ತಿಕೊಪ್ಪ ಉಪಸ್ಥಿತರಿದ್ದರು.

**ಹೆಣ್ಣು ಮಕ್ಕಳ ಶಾಲೆ:** ಪಟ್ಟಣದ ಸರ್ಕಾರಿ ಮಾದರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ಡಾ. ಬಾಬು ಜಗಜೀವನರಾಂ ಜಯಂತಿ ಆಚರಿಸಲಾಯಿತು. ಮಾಸೂರು-ರಟ್ಟೀಹಳ್ಳಿ ಭಾಗದ ಶಿಕ್ಷಣ ಸಂಯೋಜಕ ಎನ್.ವಿ. ನಾಯಕ, ಮುಖ್ಯ ಶಿಕ್ಷಕ ವಿ.ಆರ್. ಪೂಜಾರ, ವಿನಾಯಕ ಭೀಮಪ್ಪನವರ, ಎನ್.ಬಿ. ಬೀಡಿವಾಲೆ, ಪಿ.ಎಸ್. ನೇಕಾರ ಉಪಸ್ಥಿತರಿದ್ದರು.

**ಪಪಂ ರಟ್ಟೀಹಳ್ಳಿ:** ಇಲ್ಲಿನ ಪಟ್ಟಣ ಪಂಚಾಯಿತಿ ಕಾರ್ಯಾಲಯದ ಎದುರು ಡಾ. ಬಾಬು ಜಗಜೀವನರಾಂ ಜಯಂತಿ ನಿಮಿತ್ತ ಅವರ ಭಾವಚಿತ್ರಕ್ಕೆ ಪುಷ್ಪ ಗುಚ್ಛ ನೆರವೇರಿಸಲಾಯಿತು. ಪಪಂ ಮುಖ್ಯಾಧಿಕಾರಿ ಉಮೇಶ ಗುಡ್ಡದ, ರಾಜಕುಮಾರ ಹೆಂದ್ರೆ, ಪರಮೇಶಪ್ಪ ಅಂತರವಳ್ಳಿ, ಸಂತೋಷ ಬಳಚಿ, ಮಂಜಪ್ಪ ಚಲವಾದಿ, ವೀರೇಶ ದ್ಯಾವಕ್ಕಳವರ, ಬಸವರಾಜ ಕವಲೆತ್ತು, ಅನುರಾಧ ಸುಣಗಾರ ಇದ್ದರು.

**ಕವಳಿಕುಪ್ಪಿ ಶಾಲೆ:** ಕವಳಿಕುಪ್ಪಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಬಾಬು ಜಗಜೀವನರಾಂ ಜಯಂತಿ ಆಚರಿಸಲಾಯಿತು. ಮುಖ್ಯ ಶಿಕ್ಷಕ ಚಂದ್ರಶೇಖರ ಅಂಗಡಿ, ಶಿಕ್ಷಕ ವೀರಯ್ಯ ಹಿರೇಮಠ, ಕರಬಸಮ್ಮ ಹಿರೇಮಠ, ಸುನಿತಾ ಹುಲಗಿನಕಟ್ಟಿ, ಕಾವ್ಯ ಕಂಬಾಳಿಮಠ, ಪ್ರೇಮಾ ಹಿರೇಮಠ, ಹಾಲಸ್ವಾಮಿ, ಪ್ರಶಾಂತ ಹಾಜರಿದ್ದರು.



ರಟ್ಟೀಹಳ್ಳಿಯ ತಹಸೀಲ್ದಾರ್ ಕಚೇರಿಯಲ್ಲಿ ಸೋಮವಾರ ನಡೆದ ಡಾ. ಬಾಬು ಜಗಜೀವನರಾಂ ಅವರ ಜನ್ಮದಿನಾಚರಣೆಯಲ್ಲಿ ಅವರ ಭಾವಚಿತ್ರಕ್ಕೆ ಕೃಷಿ ಸಚಿವ ಬಿ.ಸಿ. ಪಾಟೀಲ ಪುಷ್ಪ ನಮನ ಸಲ್ಲಿಸಿದರು.

**ಕನ್ನಡ ಪ್ರಭ, ದಿನಾಂಕ ೦೬/೦೪/೨೦೨೧**

# ಆಹಾರ ಭದ್ರತೆಯಲ್ಲಿ ಜಗಜೀವನರಾಂ ಪಾತ್ರ ಬಹುಮುಖ್ಯ: ನಾಯಕ



ಶಿಗ್ಗಾವಿ: ಜಾನಪದ ವಿವಿಯಲ್ಲಿ ಜಗಜೀವನರಾಂ ಜಯಂತಿ ಆಚರಿಸಲಾಯಿತು.

ಶಿಗ್ಗಾವಿ: ಹಸಿರು ಕ್ರಾಂತಿ ಹರಿಕಾರ ಬಾಬು ಜಗಜೀವನರಾಂ ಅವರು ದೇಶದ ಆಹಾರದ ಅಭದ್ರತೆ ಹೋಗಲಾಡಿಸುವಲ್ಲಿ ಮಹತ್ವದ ಪಾತ್ರ ನಿರ್ವಹಿಸಿದ್ದಾರೆ ಎಂದು ಕರ್ನಾಟಕ ಜಾನಪದ ವಿವಿ ಕುಲಪತಿ ಪ್ರೊ| ಡಿ.ಬಿ. ನಾಯಕ ಹೇಳಿದರು. ಜಾನಪದ ವಿವಿಯಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಡಾ| ಬಾಬು ಜಗಜೀವನರಾಂ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೇಶದ ಅಭಿವೃದ್ಧಿಗೆ ಅವರು ಕೈಗೊಂಡ ಆಡಳಿತಾತ್ಮಕ ನಿರ್ಧಾರಗಳು ಇಂದಿಗೂ ಪ್ರಸ್ತುತ. ಕೃಷಿ ಹಾಗೂ ರಕ್ಷಣಾ ಸಚಿವರಾಗಿ ಸಮರ್ಥವಾಗಿ ಕಾರ್ಯ ನಿರ್ವಹಿಸಿದ ಅವರು ಪ್ರಧಾನ ಮಂತ್ರಿಯಾಗುವ ಸಾಮರ್ಥ್ಯ ಹೊಂದಿದ್ದರು ಎಂದರು. ಕುಲಸಚಿವ ಪ್ರೊ| ಕೆ.ಎನ್. ಗಂಗಾನಾಯಕ ಮಾತನಾಡಿದರು. ಜನಪದ ಕಲಾ ಅಧ್ಯಾಪಕ ಶರೀಫ್ ಮಾಕಪ್ಪನವರ ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕ ಡಾ| ಮಲ್ಲಿಕಾರ್ಜುನ ಮಾನ್ಪಡೆ ಪ್ರಾಸ್ತಾವಿಕ ಮಾತನಾಡಿದರು.

ಹಿರೇಕೆರೂರ: ತಾವರಗಿ

**ಉದಯವಾಣಿ, ದಿನಾಂಕ ೦೬/೦೪/೨೦೨೧**